ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ,

ದೇವದುರ್ಗ.

**CC No.558/2023**

**PW-2 CW-3**

| | | |
|---|---|---|
| ಸಾಕ್ಷಿದಾರನ ಹೆಸರು | ಃ | ಶರಣಪ್ಪ |
| ತಂದೆ | ಃ | ಭೀಮಣ್ಣ |
| ವಯಸ್ಸು | ಃ | 55 |
| ಉದ್ಯೋಗ | ಃ | ಒಕ್ಕಲುತನ |
| ವಾಸಸ್ಥಳ | ಃ | ವಂದಲಿ |
| ಪ್ರಮಾಣಿಕರಿಸಿದ ದಿನಾಂಕ | ಃ | **31.07.2025** |

ಮುಖ್ಯ ವಿಚಾರಣೆಃ ಮಾನ್ಯ ಸ ಸ ಅ ರವರಿಂದ.

ಪ್ರಕರಣದ ಬಗ್ಗೆ ನನಗೇನು ಗೊತ್ತಿಲ್ಲ. ಪೋಲಿಸರು ನನ್ನ ಸಮಕ್ಷಮ ಯಾವುದೇ ಪಂಚನಾಮೆ ಮಾಡಿಲ್ಲ. ಯಾವುದೇ ವಸ್ತುಗಳನ್ನು ಜಪ್ತಿ ಮಾಡಿಕೊಂಡಿಲ್ಲ. ಪಂಚನಾಮೆಯಲ್ಲಿ ನನ್ನ ಹೆಬ್ಬೆಟ್ಟಿನ ಗುರುತನ್ನು ಹಾಕುತ್ತೇನೆ. ಪಂಚನಾಮೆಯಲ್ಲಿ ಬರೆದ ಸಂಗತಿಗಳು ನನಗೆ ಗೊತ್ತಿಲ್ಲ.

**(**ಈ ಹಂತದಲ್ಲಿ ಮಾನ್ಯ ಸಸಅ ರವರು ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ಕೋರಿದ್ದು ಅನುಮತಿ ನೀಡಲಾಯಿತು.**)**

ಪಾಟೀ ಸವಾಲುಃ ಮಾನ್ಯ ಸ ಸ ಅ ರವರಿಂದ.

ದಿನಾಂಕ 14-05-2023 ರಂದು ಬೆಳಿಗ್ಗೆ 08.00 ರಿಂದ 09.00 ಗಂಟೆ ವರೆಗೆ ಘಟನ ಸ್ಥಳದಲ್ಲಿ ನನ್ನ ಮತ್ತು ಚಾಸಾ-2 ರವರ ಸಮಕ್ಷಮ ಪೋಲಿಸರು ಪಂಚನಾಮೆ ಮಾಡಿ ಸ್ಥಳದಿಂದ ಒಂದು ಬಡಿಗೆಯನ್ನು ಜಪ್ತಿ ಮಾಡಿಕೊಂಡು ಪಂಚನಾಮೆ ಮಾಡಿರುತ್ತಾರೆ ಎಂದರೆ ಸರಿಯಲ್ಲ. ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆಂದರೆ ಸರಿಯಲ್ಲ.

ಪಾಟೀ ಸವಾಲುಃ ಆರೋಪಿ ಪರ ವಕೀಲರು ಇಲ್ಲ ಎಂದು ಹೇಳುತ್ತಾರೆ.

ಮರು ವಿಚಾರಣೆಃ ಇಲ್ಲ

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಗಿದೆ)

ಓ.ಹೇ.ಕೇ.ಸರಿ.ಇದೆ.

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ,
ದೇವದುರ್ಗ.